ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಮೂಲಭೂತ ಸೌಲಭ್ಯ

67(68): ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ): ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಮೂಲಭೂತ ಸೌಲಭ್ಯ ಇಲಾಖೆಯಿಂದ ಕಳೆದ ಎರಡು ವರ್ಷಗಳಿಂದ ಜನತೆಗೆ ಮೂಲಭೂತ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ತಯಾರಿಸಿರುವ ಯೋಜನೆಯ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು?

ಆ) ಇದಕ್ಕಾಗಿ ಮೀಸಲಾಗಿರಿಸಿರುವ ಹಣವೆಷ್ಟು? ಯಾವ ಯಾವ ಭಾಗದಲ್ಲಿ ಕಾಮಗಾರಿಯನ್ನು ಕೈಗೊಂಡು ಮೂಲಭೂತ ಸೌಲಭ್ಯವನ್ನು ಒದಗಿಸಲಾಗಿದೆ? (ತಾಲ್ಲೂಕುವಾರು ವಿವರ ಒದಗಿಸುವುದು);

ಶ್ರೀ ಜಿ. ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು):

ಅ) ಮೂಲಭೂತ ಅಭಿವೃದ್ಧಿ ಇಲಾಖೆಯ ವ್ಯಾಪ್ತಿಯಲ್ಲಿ ರೈಲ್ವೆ ಯೋಜನೆಗಳು ಹಾಗೂ ವಿಮಾನ ನಿಲ್ದಾಣಗಳ ವಿಷಯಗಳನ್ನು ನಿರ್ವಹಣೆ ಮಾಡುತ್ತಿದ್ದು ಈ ಇಲಾಖೆಯ ವ್ಯಾಪ್ತಿಯಿಂದ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿರುವ ರೈಲು ಮಾರ್ಗದ ಗೇಜ್ ಪರಿವರ್ತನೆಯ ಬಾಕಿ ಕಾಮಗಾರಿಯನ್ನು ದಿನಾಂಕ:01.04.2010 ರಿಂದ ಜಾರಿಗೆ ಬರುವಂತೆ ಶೇ.50:50 ವೆಚ್ಚ ಹಂಚಿಕೆ ಆಧಾರದ ಮೇಲೆ ಕೈಗೆತ್ತಿಕೊಳ್ಳಲಾಗಿದೆ. ಈ ಮಾರ್ಗಕ್ಕೆ ಪ್ರಸಕ್ತ ಸಾಲಿನಲ್ಲಿ ರಾಜ್ಯ ಸರ್ಕಾರದ ಪಾಲು ರೂ. 30.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಆ) ರಾಜ್ಯದಲ್ಲಿ ರೈಲು ಯೋಜನೆಗಳ ವೆಚ್ಚ ಹಂಚಿಕೆಯಡಿ 2010–11 ನೇ ಸಾಲಿನ ಆಯವ್ಯಯದಲ್ಲಿ ರೂ. 492.02 ಕೋಟಿಯನ್ನು ಒದಗಣೆ ಮಾಡಲಾಗಿದ್ದು ಈ ಮೊತ್ತದಲ್ಲಿ ಸದರಿ ಯೋಜನೆಗೆ ಹಣ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.